10-12-2020

ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 501ಕ್ಕೆ ಉತ್ತರಗಳು: 10-12-2020

ಕ್ರಸಂ	ಪ್ರಶ್ನೆಗಳು	ಉತ್ತರಗಳು
(ಅ)	ಕೋವಿಡ್-19 ಪ್ರಯುಕ್ತ ಎಲ್ಲಾ ನೇಮಕಾತಿಗಳಿಗೂ ಆರ್ಥಿಕ ಮಿತಿವ್ಯಯ ಹೇರಿರುವುದು ನಿಜವೇ; ಹಾಗಾದರೆ, ಈ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು;	ಕೋವಿಡ್-19 ಸಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ಹಾಗೂ **ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020ರನ್ವಯ ರಾಜ್ಯದ ಎಲ್ಲಾ ಸಿವಿಲ್ ಸೇವಾ ನೇರ ನೇಮಕಾತಿಗಳಿಗೆ** ಆರ್ಥಿಕ ಮಿತವ್ಯಯ ಹೇರಲಾಗಿದೆ. **ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯದ ಆದೇಶವನ್ನು ತಕ್ಷಣ ಹಿಂಪಡೆಯುವುದು** ಕಷ್ಟಸಾಧ್ಯವಾಗಿರುತ್ತದೆ.
(ಆ)	ಹಣಕಾಸು ಇಲಾಖೆಯು ರಾಜ್ಯದಲ್ಲಿ 1995ರ ನಂತರ ಪ್ರಾರಂಭವಾದ ಎಲ್ಲಾ ವರ್ಗದ ಅರ್ಹವಾದ ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಿಗೆ ಅನುದಾನ ನೀಡಲು ಇರುವ ತೊಂದರೆಗಳೇನು; (ವಿವರವಾದ ಮಾಹಿತಿ ನೀಡುವುದು)	1995ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳು ಅನುದಾನಕ್ಕೆ ಒಳಪಡಿಸುವ ಬಗ್ಗೆ ಸರ್ಕಾರ ಯಾವುದೇ ರೀತಿಯ ನಿರ್ಧಾರ ತೆಗೆದುಕೊಂಡಿರುವುದಿಲ್ಲ. ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಉಪ ಸಭಾಪತಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳು ಹಾಗೂ ಅಧಿಕಾರಿಗಳೊಂದಿಗೆ ದಿನಾಂಕ:15.09.2017 ಮತ್ತು ದಿನಾಂಕ:27.09.2017 ರಂದು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಆಡಳಿತ ಮಂಡಳಿಗಳ ಸಮಸ್ಯೆಗಳ ಕುರಿತು ನಡೆದ ಸಭೆಯ ನಡವಳಿಯ ಕ್ರಮ ಸಂಖ್ಯೆ; 11(ಎ) ರಲ್ಲಿ ತೆಗೆದುಕೊಂಡ ನಿರ್ಧಾರವು ಈ ಕೆಳಕಂಡಂತಿರುತ್ತದೆ. **"1994-95ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳಿಗೆ ವೇತನಾನುದಾನ ವಿಸ್ತರಿಸುವ ಕುರಿತು ಪರಿಗಣನೆಗೆ ಇರುವುದಿಲ್ಲ."**

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
		ಪ್ರಸ್ತುತ, ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ, ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಸರ್ಕಾರದ ವೆಚ್ಚದಲ್ಲಿ ಮಿತವ್ಯಯದ ನೀತಿ ಅನುಸರಿಸಬೇಕಾಗಿದೆ. ಆದ್ದರಿಂದ, ಯಾವುದೇ ಹೊಸ ಶಾಲಾ ಕಾಲೇಜುಗಳು ಅನುದಾನಕ್ಕೆ ಒಳಪಡಿಸುವುದು ಸೂಕ್ತವಾಗಿರುವುದಿಲ್ಲ.
(ಇ)	ಯಾವ ಕಾಲಮಿತಿಯೊಳಗೆ ಸರ್ಕಾರ ಈ ಶಾಲಾ ಕಾಲೇಜುಗಳಿಗೆ ಅನುದಾನ ನೀಡುವುದು;	ಮೇಲಿನ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಸಂಖ್ಯೆ:ಆಇ 245 ವೆಚ್ಚ-8/2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ

ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:501ಗೆ ಪೂರಕ ಟಿಪ್ಪಣಿ

ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ. ಹಾಗೂ ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

2. ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಇದಕ್ಕಾಗಿ ಸರ್ಕಾರದ ವೆಚ್ಚದ ಬಾಬ್ತಿನಲ್ಲಿ ಮಿತವ್ಯಯ ಪಾಲಿಸುವ ಉದ್ದೇಶಕ್ಕೆ ಕೈಗೊಂಡಿರುವ ಕ್ರಮಗಳಲ್ಲಿ ನೇಮಕಾತಿಗಳನ್ನು ತಡೆಹಿಡಿದಿರುವುದು ಸೇರಿದೆ. ಈ ಹಿನ್ನೆಲೆಯಲ್ಲಿ ಆರ್ಥಿಕ ಮಿತವ್ಯಯದ ಆದೇಶವನ್ನು ತಕ್ಷಣ ಹಿಂಪಡೆಯುವುದು ಕಷ್ಟಸಾಧ್ಯವಾಗಿರುತ್ತದೆ.

3. ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಮಾನ್ಯ ಉಪ ಸಭಾಪತಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳು ಹಾಗೂ ಅಧಿಕಾರಿಗಳೊಂದಿಗೆ ದಿನಾಂಕ:15.09.2017 ಮತ್ತು ದಿನಾಂಕ:27.09.2017 ರಂದು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಆಡಳಿತ ಮಂಡಳಿಗಳ ಸಮಸ್ಯೆಗಳ ಕುರಿತು ನಡೆದ ಸಭೆಯ ನಡವಳಿಯ ಕ್ರಮ ಸಂಖ್ಯೆ: 11(ಎ) ರಲ್ಲಿ ತೆಗೆದುಕೊಂಡ ನಿರ್ಧಾರವು ಈ ಕೆಳಕಂಡಂತಿರುತ್ತದೆ.

"1994-95ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳಿಗೆ ವೇತನಾನುದಾನ ವಿಸ್ತರಿಸುವ ಕುರಿತು ಪರಿಗಣನೆಗೆ ಇರುವುದಿಲ್ಲ."

4. ಪ್ರಸ್ತುತ, ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿರುವುದರಿಂದ, ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುತ್ತದೆ. ಸರ್ಕಾರದ ವೆಚ್ಚದಲ್ಲಿ ಮಿತವ್ಯಯದ ನೀತಿ ಅನುಸರಿಸಬೇಕಾಗಿದೆ. ಆದ್ದರಿಂದ, ಯಾವುದೇ ಹೊಸ ಶಾಲಾ ಕಾಲೇಜುಗಳು ಅನುದಾನಕ್ಕೆ ಒಳಪಡಿಸುವುದು ಸೂಕ್ತವಾಗಿರುವುದಿಲ್ಲ.

****